ಶ್ರೀ ಬಿ. ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು) :

(ಅ) ಬಂದಿದೆ

(ಆ) ಬಂದಿದೆ

ಇಲ್ಲ

ಪುರಸಭೆ ಒಪ್ಪಿಗೆ ನೀಡಿರುವುದಿಲ್ಲ.

(ಇ) ಬಂದಿದೆ.

(ಈ) ಬರ ಪರಿಹಾರ ಕಾಮಗಾರಿಯಡಿ ಬೋರ್‌ವೆಲ್‌ಗಳನ್ನು ಹಾಕಲು ಕ್ರಮ ಕೈಗೊಳ್ಳಲಾಗುವುದು.

ಹಿಂದುಳಿದ ವರ್ಗಗಳಿಗೆ ಸಿಂಧುತ್ವ ಪ್ರಮಾಣ ಪತ್ರ ನೀಡುವಲ್ಲಿ ವಿಳಂಬ

1642 (1894) : ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) ಹಿಂದುಳಿದ ವರ್ಗಗಳಿಗೆ ನೀಡುತ್ತಿರುವ ಸಿಂಧುತ್ವ ಪ್ರಮಾಣ ಪತ್ರವು ಯಾವ ನಿಯಮಗಳಡಿ ನೀಡಲಾಗುತ್ತಿದೆ;

(ಆ) ವೃತ್ತಿ ಶಿಕ್ಷಣಕ್ಕಾಗಿ ಸಿಂಧುತ್ವ ಪ್ರಮಾಣ ಪತ್ರವು ಅತ್ಯಗತ್ಯವಾಗಿದ್ದು ಅದನ್ನು ನೀಡುವಲ್ಲಿ ವಿಳಂಬವಾಗುವುದನ್ನು ತಪ್ಪಿಸಲು ಮುಂಚಿತವಾಗಿ ನೀಡಲು ಸರ್ಕಾರವು ಕ್ರಮ ತೆಗೆದುಕೊಳ್ಳುವುದೇ ಹಾಗೂ ಪ್ರಸ್ತುತ ಅದನ್ನು ಸಂಬಂಧಪಟ್ಟವರು ನೀಡುತ್ತಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಪ್ರಮಾಣ ಪತ್ರವನ್ನು ಪಡೆಯಲು : ಈಗ ಇರುವ ನಿಯಮಗಳು ತುಂಬಾ ಕಠಿಣವಾಗಿದ್ದು ಅದನ್ನು ಕಂದಾಯ ಇಲಾಖೆಗೆ ವರ್ಗಾಯಿಸಿ ಸರಳಗೊಳಿಸಲಾಗುವುದೇ;

(ಈ) ವಿಶೇಷತ ಃ ಬೆಂಗಳೂರು ನಗರ ಜಿಲ್ಲೆಗೆ ಹೋಬಳಿ ಮಟ್ಟ ಅಥವಾ ಅಸಿಸ್ಟೆಂಟ್ ಕಮೀಷನರ್ ಮಟ್ಟದಲ್ಲಿ ಸಿಂಧುತ್ವ ಪ್ರಮಾಣ ಪತ್ರವನ್ನು ನೀಡಲು ಸರ್ಕಾರ ವ್ಯವಸ್ಥೆ ಮಾಡುವುದೇ?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) :

(ಅ) ಕರ್ನಾಟಕ ಪರಿಶಿಷ್ಟ ಜಾತಿ : ಪರಿಶಿಷ್ಟ ವರ್ಗ ಮತ್ತು ಇತರೇ ಹಿಂದುಳಿದ ವರ್ಗಗಳ (ನೇಮಕಾತಿ ಮೀಸಲಾತಿ 1991ರ ಇತರೆ) ಅಧಿನಿಯಮ ಸೆಕ್ಷನ್ 13 ದನ್ವಯ ಹೊರಡಿಸಲಾದ - 1992ರ ನಿಯಮಗಳು ಹಾಗೂ ಇತ್ತೀಚೆಗೆ ಪರಿಷ್ಕರಿಸಿ ಸರ್ಕಾರದ ಅಧಿಸೂಚನೆ ಸಂಖ್ಯೆ : ಎಸ್‌ಡಬ್ಲ್ಯೂಡಿ 132 ಎಸ್‌ಎಡಿ 97(2), ದಿನಾಂಕ: 8-2-2000 ದಲ್ಲಿ ಪ್ರಕಟಣೆ ಹೊರಡಿಸಿದ್ದು, ಆ ನಿಯಮವನ್ನು ಪಾಲಿಸಿ ಸಿಂಧುತ್ವ ಪ್ರಮಾಣ ನೀಡಲಾಗುತ್ತಿದೆ.

(ಅ) ವೃತ್ತಿ ಶಿಕ್ಷಣಕ್ಕಾಗಿ ಸಿಂಧುತ್ವ ಪ್ರಮಾಣ ಪತ್ರಗಳನ್ನು ವಿಳಂಬ ಮಾಡದೇ ನೀಡಲು ಆಗಿಂದಾಗ್ಗೆ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು : ಜಿಲ್ಲಾ ಅಧಿಕಾರಿಗಳು ಹಿಂದುಳಿದ ವರ್ಗಗಳ ಇಲಾಖೆ ಇವರಿಗೆ ಸೂಚನೆಗಳನ್ನು ನೀಡಲಾಗಿದೆ. ಸಿಂಧುತ್ವ ಪ್ರಮಾಣ ಪತ್ರ ನೀಡುತ್ತಿಲ್ಲ ಎಂಬುದರ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. ಶಿಕ್ಷಣಕ್ಕಾಗಿ ಸಿಂಧುತ್ವ ಪ್ರಮಾಣ ಪತ್ರ ನೀಡುವಲ್ಲಿ ವಿಳಂಬ ಆಗಿರುವ ವಿಷಯವು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. ಶಿಕ್ಷಣಕ್ಕಾಗಿ ಮುಂಚಿತವಾಗಿ ಸಿಂಧುತ್ವ ಪ್ರಮಾಣ ಪತ್ರ ನೀಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.

(ಇ) ಸರ್ಕಾರಿ ಅಧಿಸೂಚನೆ ಸಂಖ್ಯೆ: ಸಕಇ 132 ಎಸ್‌ಎಡಿ 97, ದಿನಾಂಕ: 8-2-2000 ರಲ್ಲಿ ನಿಯಮಗಳು ಸರಳಗೊಳಿಸಲಾಗಿದೆ.

(ಈ) ಬೆಂಗಳೂರು ನಗರದಂಥ ಹೆಚ್ಚಿನ ಸಂಖ್ಯೆಯಲ್ಲಿ ಅಭ್ಯರ್ಥಿಗಳು ಇರುವಂತಹ ಜಿಲ್ಲೆಯಲ್ಲಿ ಹೆಚ್ಚುವರಿ ಪರಿಶೀಲನಾ ಸಮಿತಿಯನ್ನು ರಚಿಸಲು ನಿಯಮಗಳಲ್ಲಿ ಅವಕಾಶವಿರುತ್ತದೆ. ಇದನ್ನು ಪರಿಶೀಲಿಸಲಾಗುವುದು.

ರಾಜ್ಯದಲ್ಲಿ ಗಣಿಗಾರಿಕೆಗೆ ಸರ್ಕಾರ ನಿಗದಿಪಡಿಸಿರುವ ನಿಬಂಧನೆಗಳ ಜಾರಿ ಬಗ್ಗೆ

1643 (1896) : ಶ್ರೀ ಪ್ರಭಾಕರ ಬಂಗೇರ. (ಬೆಳ್ತಂಗಡಿ) : ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) ರಾಜ್ಯದಲ್ಲಿ ಗಣಿಗಾರಿಕೆಗೆ ಸರ್ಕಾರ ನಿಗದಿಪಡಿಸಿರುವ ನಿಬಂಧನೆಗಳೇನು; ಅವುಗಳನ್ನು ಕಟ್ಟುನಿಟ್ಟಾಗಿ ಜಾರಿಗೆ ತರಲಾಗಿದೆಯೇ;

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪರಿಸರಕ್ಕೆ ಮಾರಕ ಆಗಿರುವ ಗಣಿಗಾರಿಕೆಗೆ ಪರವಾನಗಿ ನೀಡುವ ಸಂದರ್ಭದಲ್ಲಿ ಸರ್ಕಾರವು ಮುಂದಾಲೋಚನೆಯಿಂದ ಕ್ರಮ ಜರುಗಿಸುತ್ತದೆಯೇ;

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ದಾಖಲಾಗಿರುವ ಅಕ್ರಮ ಗಣಿಗಾರಿಕೆಯ ಪ್ರಕರಣಗಳ ಸಂಖ್ಯೆ ಎಷ್ಟು;

(ಈ) ದಾಖಲಾದ ಪ್ರಕರಣಗಳ ಬಗ್ಗೆ ಸರ್ಕಾರವು ತೆಗೆದುಕೊಂಡ ಕ್ರಮಗಳು ಯಾವುವು?

ಶ್ರೀ ವಿ. ಮುನಿಯಪ್ಪ (ಗಣಿ ಮತ್ತು ಭೂವಿಜ್ಞಾನ ಸಚಿವರು) :

(ಅ) ರಾಜ್ಯದಲ್ಲಿ ಗಣಿಗಾರಿಕೆಗಾಗಿ, ಮುಖ್ಯ ಖನಿಜಗಳಿಗಾಗಿ ಖನಿಜ ರಿಯಾಯಿತಿ ನಿಯಮಗಳು, 1960ರ ಅಡಿಯಲ್ಲಿ ರಚಿತವಾಗಿರುವ 14, 18, 19, 22ಎ ಹಾಗೂ 27ನೇ ನಿಯಮಗಳಲ್ಲಿ ನಿಬಂಧನೆಗಳನ್ನು ನಿಗದಿಪಡಿಸಲಾಗಿದೆ. ಮತ್ತು ನಿರ್ದಿಷ್ಟ ಉಪ ಖನಿಜಗಳಿಗೆ ಹಾಗೂ ಇತರೆ ಉಪ ಖನಿಜಗಳಿಗೆ ಕರ್ನಾಟಕ ಉಪ ಖನಿಜ ರಿಯಾಯಿತಿ ನಿಯಮಗಳು, 1994ರ ಅಡಿಯಲ್ಲಿ ರಚಿತವಾಗಿರುವ 6, 8, 12, 15, 16, 17, 25, 26 ಹಾಗೂ 29ನೇ ನಿಯಮಗಳಲ್ಲಿ ನಿಬಂಧನೆಗಳನ್ನು ನಿಗಧಿಪಡಿಸಲಾಗಿದೆ. ಈ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲಾಗುತ್ತಿದೆ.